ದಿನಾಂಕ:29/6/2019 ರಂದು ಶನಿವಾರ ಮಧ್ಯಾಹ್ನ 02:30 ಗಂಟೆಗೆ ನಾಗಮಂಗಲ ತಾಲ್ಲೂಕಿನ ಬೆಳ್ಳೂರು ಉಪವಿಭಾಗ ಕಛೇರಿಯಲ್ಲಿ ನಡೆದ ಜನಸಂಪರ್ಕ ಸಭೆಯ ನಡಾವಳಿಗಳು.

ಹಾಜರಿದ್ದ ಅಧಿಕಾರಿಗಳು / ನೌಕರರು.

ಶ್ರೀ/ಶ್ರೀಮತಿ/ಕುಮಾರಿ:

1) ನಾರಾಯಣ ಕಳ್ಳಿಮನಿ : ಕಾರ್ಯನಿರ್ವಾಹಕ ಇಂಜಿನಿಯರ್(ವಿ), ನಾಗಮಂಗಲ ವಿಭಾಗ
2) ಜಗದೀಶ್ : ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಬೆಳ್ಳೂರು ಉಪವಿಭಾಗ
3) ಜಿ. ರಾಮಚಂದ್ರ : ಲೆಕ್ಕಾಧಿಕಾರಿ, ನಾಗಮಂಗಲ ವಿಭಾಗ
4) ವಿಜಯಕುಮಾರ್ : ಕಿರಿಯ ಇಂಜಿನಿಯರ್(ವಿ), ಬೆಳ್ಳೂರು ಉಪವಿಭಾಗ
5) ನಂದಕುಮಾರ್ : ಕಿರಿಯ ಇಂಜಿನಿಯರ್(ವಿ), ಬಿಂಡಿಗನವಿಲೆ ಶಾಖೆ
6) ನವೀನ್‌ಕುಮಾರ್ : ಕಿರಿಯ ಇಂಜಿನಿಯರ್(ವಿ), ಕದಬಹಳ್ಳಿ ಶಾಖೆ

ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾ ಮತ್ತು ಪಾ ಉಪವಿಭಾಗ ಬೆಳ್ಳೂರು ರವರು ಸಭೆಗೆ ಹಾಜರಿದ್ದ ಎಲ್ಲಾ ಅಧಿಕಾರಿ/ನೌಕರರನ್ನು ಹಾಗೂ ವಿದ್ಯುತ್ ಗ್ರಾಹಕರನ್ನು ಸ್ವಾಗತಿಸಿದರು.

ವಿದ್ಯುತ್ ಗ್ರಾಹಕರ ಕುಂದು ಕೊರತೆಗಳನ್ನು ಆಲಿಸಿ ಬಗೆಹರಿಸುವ ನಿಟ್ಟಿನಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಜನ ಸಂಪರ್ಕ ಸಭೆಯನ್ನು ನಡೆಸುವಂತೆ ಕೆ.ಇ.ಆರ್.ಸಿ ರವರಿಂದ ಆದೇಶವಾಗಿರುತ್ತದೆ. ವಿದ್ಯುತ್ ದರವನ್ನು ಪರಿಷ್ಕರಿಸುವ ಸಂದರ್ಭದಲ್ಲಿ ವಿದ್ಯುತ್ ಬಳಕೆದಾರರ ಒಪ್ಪಿಗೆಯ ಅವಶ್ಯಕತೆ ಇರುತ್ತದೆ. ಶಾಖಾಧಿಕಾರಿಗಳು ವಿದ್ಯುತ್ ಬಳಕೆದಾರರ ಸಮಸ್ಯೆಗಳಿಗೆ ಸ್ಪಂದಿಸುವ ಕುರಿತು ಹಾಗೂ ಗ್ರಾಹಕರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಸೆಸ್ಕ್, ಕಾರ್ಯ ಮತ್ತು ಪಾಲನಾ ವಿಭಾಗ, ನಾಗಮಂಗಲ ರವರು ವಿದ್ಯುತ್ ಸಂಬಂಧಿತ ದೂರುಗಳನ್ನು ಮೌಖಿಕವಾಗಿ/ಲಿಖಿತವಾಗಿ ಸಲ್ಲಿಸುವಂತೆ ವಿದ್ಯುತ್ ಗ್ರಾಹಕರಲ್ಲಿ/ಸಾರ್ವಜನಿಕರಲ್ಲಿ ಕೇಳಲಾಯಿತು.

ಈ ಹಿಂದಿನ ಸಭೆಗಳಲ್ಲಿ ಚರ್ಚಿಸಲಾದ/ ನೀಡಲಾದ ದೂರು ಅಥವಾ ಸಮಸ್ಯೆಗಳ ಬಗ್ಗೆ ಹಾಗೂ ಅವುಗಳನ್ನು ಬಗೆಹರಿಸಲು ಕೈಗೊಂಡ ಕ್ರಮದ ಬಗ್ಗೆ ಸಹಾಯಕಕಾರ್ಯನಿರ್ವಾಹಕ ಇಂಜಿನಿಯರ್(ವಿ), ಬೆಳ್ಳೂರು ರವರೊಂದಿಗೆ ಚರ್ಚಿಸಿ ಪರಿಶೀಲಿಸಿದರು.

Scanned by CamScanner

1) <u>ಸುರೇಶ್, ಬಂಡಿಗನವಿಲೆ ಪಿ.ಚಿಟ್ಟನಹಳ್ಳಿ :</u>

ದೂರು:– ಇ &ಐ ಯಲ್ಲಿ ಕಾರ್ಯದೇಶ ಸಂಖ್ಯೆ ನೀಡಿದ್ದರು ಸಹ ಇದುವರೆವಿಗೂ ಕಾಮಗಾರಿಯನ್ನು ನಿರ್ವಹಿಸಿರುವುದಿಲ್ಲದರ ಬಗ್ಗೆ ದೂರು.

ಕ್ರಮ:– ಒಂದು ವಾರದಲ್ಲಿ ಸೂಕ್ತ ಕ್ರಮ ಕೈಗೊಂಡು ಕಾಮಗಾರಿ ನಿರ್ವಹಿಸಲು ಸಂಬಂಧಪಟ್ಟ ಶಾಖಾಧಿಕಾರಿಯವರಿಗೆ, ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಸೂಚಿಸಿದರು.

2) <u>ನಾಗರಾಜು, ಮಾಯಗೋನಹಳ್ಳಿ, ಮೊಬೈಲ್ ನಂ:–</u>

ದೂರು:– ಮಾಯಗೋನಹಳ್ಳಿಯ ಕುರುಡು ಮಾಯಣ್ಣನ ಕೊಪ್ಪಲು ಗ್ರಾಮದಲ್ಲಿ 11 ಕೆವಿ ಮಾರ್ಗವು ಬಾಗಿರುವ ಕುರಿತು.

ಕ್ರಮ:– ದೂರಿಗೆ ಸಂಬಂಧಪಟ್ಟಂತೆ ಸ್ಥಳ ಪರಿಶೀಲಿಸಿ ಮಧ್ಯಂತರ ಕಂಬಗಳನ್ನು ಅಳವಡಿಸಲು ಅಂದಾಜುಪಟ್ಟಿಯನ್ನು ತಯಾರಿಸಲು ಶಾಖಾಧಿಕಾರಿಯವರಿಗೆ ಸೂಚಿಸಿದರು.

3) <u>ಚಂದ್ರು, ಲಾಳನಕೆರೆ, ಕದಬಹಳ್ಳಿ ಮೊಬೈಲ್ ನಂ:–7019166502</u>

ದೂರು:–ಎಲ್‌ಟಿ ಮಾರ್ಗವು ಜೋಲು ಬಿದ್ದಿದ್ದು ಮಧ್ಯಂತರ ಕಂಬವನ್ನು ಅಳವಡಿಸಲು ಕೋರಿರುತ್ತಾರೆ.

ಕ್ರಮ:– ಸ್ಥಳ ಪರಿಶೀಲನೆ ನಡೆಸಿ ನಿಗಮದ ನಿಯಮಾನುಸಾರ ಸೂಕ್ತ ಕ್ರಮವಹಿಸಲು ಸಹಾಯಕ ಕಾರ್ಯನಿರ್ವಾಹಕ ಇಂಜಿನಿರ್(ವಿ) ರವರಿಗೆ ಮತ್ತು ಶಾಖಾಧಿಕಾರಿಯವರಿಗೆ ಸೂಚಿಸಿದರು.

4) <u>ಪ್ರೇಮ್, ಬೆಳ್ಳೂರು, ಅಂಬಲಜೀರಹಳ್ಳಿ,</u>

ದೂರು:– ಹಣ ಪಾವತಿಸಿದ್ದರು ಸಹ ಲಕ್ಷ್ಮಿನಾರಾಯಣ್ ರವರ ಕೊಳವೆ ಬಾವಿಗೆ ವಿದ್ಯುತ್ ಸಂಪರ್ಕ ನೀಡದಿರುವ ಬಗ್ಗೆ ದೂರು.

ಕ್ರಮ:– ಸ್ಥಳ ಪರಿಶೀಲನೆ ನಡೆಸಿ ನಿಗಮದ ನಿಯಮಾನುಸಾರ ಸೂಕ್ತ ಕ್ರಮವಹಿಸಲು ಸಹಾಯಕ ಕಾರ್ಯನಿರ್ವಾಹಕ ಇಂಜಿನಿರ್(ವಿ) ರವರಿಗೆ ಮತ್ತು ಶಾಖಾಧಿಕಾರಿಯವರಿಗೆ ಸೂಚಿಸಿದರು.

ದೂರನ್ನು ನೀಡಿದ ಗ್ರಾಹಕರ ಸಂಖ್ಯೆ :– 4

ಒಟ್ಟು ದೂರು/ಸಮಸ್ಯೆಗಳು :– 4

ಒಟ್ಟು ಹಾಜರಿದ್ದ ಗ್ರಾಹಕರ ಸಂಖ್ಯೆ:– 12

ಮೇಲ್ಕಂಡ ದೂರುಗಳಿಗೆ ತೆಗೆದುಕೊಂಡ ಕ್ರಮಗಳ ಬಗ್ಗೆ ಅನುಪಾಲನಾ ವರದಿಯನ್ನು ಮುಂದಿನ ಜನಸಂಪರ್ಕ ಸಭೆಯಲ್ಲಿ ಹಾಜರುಪಡಿಸುವಂತೆ ಉಪವಿಭಾಗಾಧಿಕಾರಿಗಳಿಗೆ ಸೂಚಿಸಲಾಯಿತು.

Scanned by CamScanner

ಸಹಾಯಕರು ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಬೆಳ್ಳೂರು ಉಪವಿಭಾಗರವರು ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ಅಧಿಕಾರಿಗಳು/ನೌಕರರು ಹಾಗೂ ಗ್ರಾಹಕರುಗಳಿಗೆ ವಂದನಾರ್ಪಣೆ ಸಲ್ಲಿಸಿದ ನಂತರ ಸಭೆಯನ್ನು ಸಂಜೆ 05:30 ಗಂಟೆಗೆ ಮುಕ್ತಾಯಗೊಳಿಸಲಾಯಿತು.

ಮೆಮೊ ಸಂಖ್ಯೆ:ಕಾನಿಇಂ(ವಿ)/ಸಕಾಇಂ(ತಾ)/ಸಇಂ(ತಾ)/ನಾ/19-20/ 1669-77 ದಿನಾಂಕ: 23-7-19

ಕಾರ್ಯನಿರ್ವಾಹಕ ಇಂಜಿನಿಯರ್(ವಿ),
ಚಾ.ವಿ.ಸ.ನಿ.ನಿ, ಕಾ ಮತ್ತು ಪಾ ವಿಭಾಗ,
ನಾಗಮಂಗಲ.

ಪ್ರತಿಯನ್ನು ಇವರ ದಯಾಪರ ಅವಗಾಹನೆಗಾಗಿ ಸಲ್ಲಿಸಲಾಗಿದೆ.

1. ಮುಖ್ಯ ಇಂಜಿನಿಯರ್(ವಿ), ಸೆಸ್ಕ್, ಕಾರ್ಯ ಮತ್ತು ಪಾಲನಾ ವಲಯ ಮೈಸೂರು.
2. ಪ್ರಧಾನ ವ್ಯವಸ್ಥಾಪಕರು(ತಾಂತ್ರಿಕ), ಸೆಸ್ಕ್, ನಿಗಮ ಕಾರ್ಯಾಲಯ ಮೈಸೂರು.
3. ಅಧೀಕ್ಷಕ ಇಂಜಿನಿಯರ್(ವಿ), ಸೆಸ್ಕ್, ಕಾರ್ಯ ಮತ್ತು ಪಾಲನಾ ವೃತ್ತ ಮಂಡ್ಯ.

ಪ್ರತಿಯನ್ನು ಇವರ ಮಾಹಿತಿಗಾಗಿ ಕಳುಹಿಸಲಾಗಿದೆ.

1. ಲೆಕ್ಕಾಧಿಕಾರಿ, ಚಾ.ವಿ.ಸ.ನಿ.ನಿ., ಕಾ ಮತ್ತು ಪಾ ವಿಭಾಗ ನಾಗಮಂಗಲ.
2. ಲೆಕ್ಕಾಧಿಕಾರಿ, (ಆಂಪ) ಚಾ.ವಿ.ಸ.ನಿ.ನಿ., ಪಾಂಡವಪುರ.
3. ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ),ಚಾ.ವಿ.ಸ.ನಿ.ನಿ., ಕಾ ಮತ್ತು ಪಾ ಉಪವಿಭಾಗ, ಬೆಳ್ಳೂರು
4. ಶಾಖಾಧಿಕಾರಿ, ಚಾ.ವಿ.ಸ.ನಿ.ನಿ., ಕಾ ಮತ್ತು ಪಾ ಶಾಖೆ ಬೆಳ್ಳೂರು/ಬಿಂಡಿಗನವಿಲೆ/ಕದಬಹಳ್ಳಿ.
5. ಕಿಆಸ/ಮು.ಕ.

Scanned by CamScanner